**ಕರ್ನಾಟಕ ಸರ್ಕಾರ**
**(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆ)**

ಸಂಖ್ಯೆ: ಕಪಂರಾಆ/ಅಭಿವೃದ್ಧಿ/78/2020

ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಕೆಂಪೇಗೌಡ ರಸ್ತೆ,
ಬೆಂಗಳೂರು, ದಿನಾಂಕ: 03-11-2020.

ಇವರಿಗೆ,

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

ಮಾನ್ಯರೇ,

ವಿಷಯ: **ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಂಥಾಲಯಗಳಲ್ಲಿ "ಓದುವ ಬೆಳಕು" ಕಾರ್ಯಕ್ರಮವನ್ನು ಅನುಷ್ಠಾನಿಸುವ ಬಗ್ಗೆ**

★★★

ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ದೇಶದ ಮಕ್ಕಳು ಸಾಮಾಜಿಕವಾಗಿ, ಭಾವನಾತ್ಮಕವಾಗಿ ಹಾಗೂ ಶೈಕ್ಷಣಿಕವಾಗಿ ಸಂಕಷ್ಟಕ್ಕೆ ಸಿಲುಕಿದ್ದು, ಶಾಲೆಗಳು ಮುಚ್ಚಿರುವುದರಿಂದ ಕಲಿಕೆಯಲ್ಲಿ ಉಂಟಾಗಿರುವ ನಷ್ಟದ ಜೊತೆಗೆ, ಶೈಕ್ಷಣಿಕ ಬೆಳವಣಿಗೆಗೂ ಹಿನ್ನಡೆಯಾಗಿದೆ. ಹಲವಾರು ಮಾಧ್ಯಮಗಳಲ್ಲಿ ವರದಿಯಾಗಿರುವ ಪ್ರಕಾರ ಮಕ್ಕಳು ಪ್ರಸ್ತುತ ಪರಿಸ್ಥಿತಿಯಿಂದಾಗಿ ಬಾಲ್ಯವಿವಾಹ ಹಾಗೂ ಬಾಲಕಾರ್ಮಿಕ ಪದ್ಧತಿಗೆ ಸಿಲುಕುತ್ತಿದ್ದಾರೆ. ಮಕ್ಕಳಿಗೆ ಆಗುತ್ತಿರುವ ಮತ್ತಷ್ಟು ನಷ್ಟವನ್ನು ತಡೆಗಟ್ಟುವ ನಿಟ್ಟಿನಲ್ಲಿ ಗ್ರಾಮ ಪಂಚಾಯತಿಯ ಗ್ರಂಥಾಲಯಗಳನ್ನು ಗ್ರಾಮೀಣ ಪ್ರದೇಶಗಳ ಜ್ಞಾನ ಕೇಂದ್ರಗಳಾಗಿ ಅಭಿವೃದ್ಧಿಪಡಿಸುವ ಮೂಲಕ ಹಾಗೂ ಗ್ರಂಥಾಲಯಗಳು ಮಕ್ಕಳ ಕಲಿಕೆಗೆ ಆಶಾಕಿರಣವಾಗುವ ಮೂಲಕ ಅವರ ಉಜ್ವಲ ಭವಿಷ್ಯಕ್ಕೆ ದಾರಿ ದೀಪವಾಗಬೇಕಿದ್ದು, ಈ ಉದ್ದೇಶದಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ **"ಓದುವ ಬೆಳಕು"** ಕಾರ್ಯಕ್ರಮಕ್ಕೆ ಮುಂದಾಗಿದೆ.

ಈ ಯೋಜನೆಯನ್ನು ಅನುಷ್ಠಾನಿಸಲು ಪಂಚಾಯತ್ ರಾಜ್ ಸಂಸ್ಥೆಗಳು ಕೆಳಕಂಡ ಕ್ರಮಗಳನ್ನು ಕೈಗೊಳ್ಳುವುದು.

- ಗ್ರಾಮ ಪಂಚಾಯತಿ ಗ್ರಂಥಾಲಯಗಳಲ್ಲಿ 6-18 ವರ್ಷದ ವಯಸ್ಸಿನ ಮಕ್ಕಳಿಗಾಗಿಯೇ ಆಯ್ಕೆ ಮಾಡಲಾದ ಪುಸ್ತಕಗಳನ್ನು ಪ್ರತ್ಯೇಕ ವಿಭಾಗ ತೆರೆದು ಇರಿಸುವುದು.
- ದಾನಿಗಳು, ಸ್ವಯಂ ಸೇವಾ ಸಂಸ್ಥೆಯವರು ಹಾಗೂ ಕಾರ್ಪೋರೇಟ್ ಸಂಸ್ಥೆಗಳು ನೀಡುವ ಹೊಸ ಹಾಗೂ ಜೋಪಾನವಾಗಿ ಬಳಸಿದ ಪುಸ್ತಕಗಳಿಂದ ಗ್ರಂಥಾಲಯಗಳನ್ನು ಪುನಶ್ಚೇತನಗೊಳಿಸುವುದು.
- ಗ್ರಾಮೀಣ ಪ್ರದೇಶದ 6-18 ವಯಸ್ಸಿನ ಮಕ್ಕಳನ್ನು ಗುರುತಿಸಿ, ಗುರುತಿಸಲಾದ ಮಕ್ಕಳ ಪಟ್ಟಿಯನ್ನು ವಾರ್ಡ್ / ಗ್ರಾಮವಾರು ವಿಂಗಡಿಸಿಕೊಂಡು, ನಂತರ ವಾರ್ಡ್ / ಗ್ರಾಮವಾರು ಸಮಯವನ್ನು ನಿಗದಿಪಡಿಸಿ, ದಿನಾಂಕ: 14-11-2020 ರಿಂದ 14-12-2020ರವರೆಗೆ ಮಕ್ಕಳ ನೋಂದಣಿ ಅಭಿಯಾನ ನಡೆಸುವುದು.
- ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯವರು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮೂಲಕ ಗ್ರಾಮ ಪಂಚಾಯತಿಯ ಶಿಕ್ಷಣ ಕಾರ್ಯಪಡೆಯ ಸದಸ್ಯರ ನೆರವಿನೊಂದಿಗೆ ದಿನಾಂಕ: 14ನೇ ನವೆಂಬರ್ 2020 ರಿಂದ 15ನೇ ಡಿಸೆಂಬರ್ 2020ರ ಒಳಗೆ

(ಒಂದು ತಿಂಗಳು) ಗ್ರಾಮೀಣ ಪ್ರದೇಶದ 6-18 ವಯಸ್ಸಿನ ಶೇಕಡ 100 ಮಕ್ಕಳು ಉಚಿತವಾಗಿ ಗ್ರಂಥಾಲಯಗಳಲ್ಲಿ ನೋಂದಾಯಿಸಿಕೊಳ್ಳುವಂತೆ ಅಗತ್ಯ ಕ್ರಮ ಕೈಗೊಳ್ಳುವುದು.

- ದಿನಾಂಕ: 14.11.2020ರಂದು ಮಕ್ಕಳನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ನೋಂದಾಯಿಸಲು ಮಕ್ಕಳ ದಿನಾಚರಣೆಯ ಪ್ರಯುಕ್ತ ಸಾಂಕೇತಿಕ ಕಾರ್ಯಕ್ರಮ ಆಯೋಜಿಸಿ ಪ್ರಾರಂಭಿಸುವ ಮೂಲಕ ಈ ಯೋಜನೆಗೆ ಅಧಿಕೃತವಾಗಿ ಚಾಲನೆ ನೀಡುವುದು.
- ಪ್ರತಿ ದಿನ ನೋಂದಾಯಿಸಲಾದ ಮಕ್ಕಳ ಸಂಖ್ಯೆಯನ್ನು ಪಂಚತಂತ್ರ ತಂತ್ರಾಂಶಲ್ಲಿ ದಾಖಲಿಸುವುದು.
- ಈ ರೀತಿ ನೋಂದಾಯಿತಗೊಂಡ ಎಲ್ಲಾ ಮಕ್ಕಳಿಗೆ ಒಂದು ಪುಸ್ತಕವನ್ನು ನೀಡಲು ಸದಸ್ಯತ್ವ ಭದ್ರತಾ ಠೇವಣಿಯನ್ನು ಗ್ರಾಮ ಪಂಚಾಯಿತಿಗಳಲ್ಲಿ ಸಂಗ್ರಹಿಸಲಾಗುವ ಗ್ರಂಥಾಲಯ ಸೆಸ್‌ನಿಂದ ಭರಿಸುವುದು.
- ಈ ಕ್ಷೇತ್ರದಲ್ಲಿ ಪರಿಣಿತಿ ಹೊಂದಿರುವ ಸ್ವಯಂ ಸೇವಾ ಸಂಸ್ಥೆಗಳ ನೆರವಿನಿಂದ ಮತ್ತು ಪರಿಣಿತ ನಿವೃತ್ತ ಶಿಕ್ಷಕರಿಂದ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವವನ್ನು ಬೆಳೆಸಲು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಚಟುವಟಿಕೆಗಳನ್ನು ಕೈಗೊಳ್ಳುವುದು.

ಮೇಲೆ ಉಲ್ಲೇಖಿಸಿದ ಎಲ್ಲಾ ಅಂಶಗಳನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಅನುಷ್ಠಾನಿಸಿ, ಸದರಿ ಯೋಜನೆಯನ್ನು ಯಶಸ್ವಿಗೊಳಿಸಿ, ಕೋವಿಡ್-19 ಸಾಂಕ್ರಾಮಿಕ ರೋಗದ ಸಂಕಷ್ಟ ಕಾಲದಲ್ಲಿ ಮಕ್ಕಳ ಮಾನಸಿಕ, ಶೈಕ್ಷಣಿಕ ಹಾಗೂ ಬೌದ್ಧಿಕ ಬೆಳವಣಿಗೆಗೆ ಅನುಕೂಲವಾಗುವಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂಚಾಯತ್ ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಕರ್ನಾಟಕ ಸರ್ಕಾರ
(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆ)

ಸಂಖ್ಯೆ: ಕಪಂರಾಆ/ಅಭಿವೃದ್ಧಿ/78/2020

ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ,
ಕೆಂಪೇಗೌಡ ರಸ್ತೆ,
ಬೆಂಗಳೂರು, ದಿನಾಂಕ: 03-11-2020.

ಇವರಿಗೆ,

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತ್‌ಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

ಮಾನ್ಯರೇ,

ವಿಷಯ: **ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಂಥಾಲಯಗಳಲ್ಲಿ "ಓದುವ ಬೆಳಕು" ಕಾರ್ಯಕ್ರಮವನ್ನು ಅನುಷ್ಠಾನಿಸುವ ಬಗ್ಗೆ**

★★★

ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ದೇಶದ ಮಕ್ಕಳು ಸಾಮಾಜಿಕವಾಗಿ, ಭಾವನಾತ್ಮಕವಾಗಿ ಹಾಗೂ ಶೈಕ್ಷಣಿಕವಾಗಿ ಸಂಕಷ್ಟಕ್ಕೆ ಸಿಲುಕಿದ್ದು, ಶಾಲೆಗಳು ಮುಚ್ಚಿರುವುದರಿಂದ ಕಲಿಕೆಯಲ್ಲಿ ಉಂಟಾಗಿರುವ ನಷ್ಟದ ಜೊತೆಗೆ, ಶೈಕ್ಷಣಿಕ ಬೆಳವಣಿಗೆಗೂ ಹಿನ್ನಡೆಯಾಗಿದೆ. ಹಲವಾರು ಮಾಧ್ಯಮಗಳಲ್ಲಿ ವರದಿಯಾಗಿರುವ ಪ್ರಕಾರ ಮಕ್ಕಳು ಪ್ರಸ್ತುತ ಪರಿಸ್ಥಿತಿಯಿಂದಾಗಿ ಬಾಲ್ಯವಿವಾಹ ಹಾಗೂ ಬಾಲಕಾರ್ಮಿಕ ಪದ್ಧತಿಗೆ ಸಿಲುಕುತ್ತಿದ್ದಾರೆ. ಮಕ್ಕಳಿಗೆ ಆಗುತ್ತಿರುವ ಮತ್ತಷ್ಟು ನಷ್ಟವನ್ನು ತಡೆಗಟ್ಟುವ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿಯ ಗ್ರಂಥಾಲಯಗಳನ್ನು ಗ್ರಾಮೀಣ ಪ್ರದೇಶಗಳ ಜ್ಞಾನ ಕೇಂದ್ರಗಳಾಗಿ ಅಭಿವೃದ್ಧಿಪಡಿಸುವ ಮೂಲಕ ಹಾಗೂ ಗ್ರಂಥಾಲಯಗಳು ಮಕ್ಕಳ ಕಲಿಕೆಗೆ ಆಶಾಕಿರಣವಾಗುವ ಮೂಲಕ ಅವರ ಉಜ್ವಲ ಭವಿಷ್ಯಕ್ಕೆ ದಾರಿ ದೀಪವಾಗಬೇಕಿದ್ದು, ಈ ಉದ್ದೇಶದಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ **"ಓದುವ ಬೆಳಕು"** ಕಾರ್ಯಕ್ರಮಕ್ಕೆ ಮುಂದಾಗಿದೆ.

ಈ ಯೋಜನೆಯನ್ನು ಅನುಷ್ಠಾನಿಸಲು ಪಂಚಾಯತ್ ರಾಜ್ ಸಂಸ್ಥೆಗಳು ಕೆಳಕಂಡ ಕ್ರಮಗಳನ್ನು ಕೈಗೊಳ್ಳುವುದು.

- ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ 6-18 ವರ್ಷದ ವಯಸ್ಸಿನ ಮಕ್ಕಳಿಗಾಗಿಯೇ ಆಯ್ಕೆ ಮಾಡಲಾದ ಪುಸ್ತಕಗಳನ್ನು ಪ್ರತ್ಯೇಕ ವಿಭಾಗ ತೆರೆದು ಇರಿಸುವುದು.
- ದಾನಿಗಳು, ಸ್ವಯಂ ಸೇವಾ ಸಂಸ್ಥೆಯವರು ಹಾಗೂ ಕಾರ್ಪೋರೇಟ್ ಸಂಸ್ಥೆಗಳು ನೀಡುವ ಹೊಸ ಹಾಗೂ ಜೋಪಾನವಾಗಿ ಬಳಸಿದ ಪುಸ್ತಕಗಳಿಂದ ಗ್ರಂಥಾಲಯಗಳನ್ನು ಪುನಶ್ಚೇತನಗೊಳಿಸುವುದು.
- ಗ್ರಾಮೀಣ ಪ್ರದೇಶದ 6-18 ವಯಸ್ಸಿನ ಮಕ್ಕಳನ್ನು ಗುರುತಿಸಿ, ಗುರುತಿಸಲಾದ ಮಕ್ಕಳ ಪಟ್ಟಿಯನ್ನು ವಾರ್ಡ್ / ಗ್ರಾಮವಾರು ವಿಂಗಡಿಸಿಕೊಂಡು, ನಂತರ ವಾರ್ಡ್ / ಗ್ರಾಮವಾರು ಸಮಯವನ್ನು ನಿಗಧಿಪಡಿಸಿ, ದಿನಾಂಕ: 14-11-2020 ರಿಂದ 14-12-2020ರವರೆಗೆ ಮಕ್ಕಳ ನೋಂದಣಿ ಅಭಿಯಾನ ನಡೆಸುವುದು.
- ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯವರು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮೂಲಕ ಗ್ರಾಮ ಪಂಚಾಯಿತಿಯ ಶಿಕ್ಷಣ ಕಾರ್ಯಪಡೆಯ ಸದಸ್ಯರ ನೆರವಿನೊಂದಿಗೆ ದಿನಾಂಕ: 14ನೇ ನವೆಂಬರ್ 2020 ರಿಂದ 15ನೇ ಡಿಸೆಂಬರ್ 2020ರ ಒಳಗೆ

(ಒಂದು ತಿಂಗಳು) ಗ್ರಾಮೀಣ ಪ್ರದೇಶದ 6-18 ವಯಸ್ಸಿನ ಶೇಕಡ 100 ಮಕ್ಕಳು ಉಚಿತವಾಗಿ ಗ್ರಂಥಾಲಯಗಳಲ್ಲಿ ನೋಂದಾಯಿಸಿಕೊಳ್ಳುವಂತೆ ಅಗತ್ಯ ಕ್ರಮ ಕೈಗೊಳ್ಳುವುದು.

- ದಿನಾಂಕ: 14.11.2020ರಂದು ಮಕ್ಕಳನ್ನು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಿಗೆ ನೋಂದಾಯಿಸಲು ಮಕ್ಕಳ ದಿನಾಚರಣೆಯ ಪ್ರಯುಕ್ತ ಸಾಂಕೇತಿಕ ಕಾರ್ಯಕ್ರಮ ಆಯೋಜಿಸಿ ಪ್ರಾರಂಭಿಸುವ ಮೂಲಕ ಈ ಯೋಜನೆಗೆ ಅಧಿಕೃತವಾಗಿ ಚಾಲನೆ ನೀಡುವುದು.
- ಪ್ರತಿ ದಿನ ನೋಂದಾಯಿಸಲಾದ ಮಕ್ಕಳ ಸಂಖ್ಯೆಯನ್ನು ಪಂಚತಂತ್ರ ತಂತ್ರಾಂಶಲ್ಲಿ ದಾಖಲಿಸುವುದು.
- ಈ ರೀತಿ ನೋಂದಾಯಿತಗೊಂಡ ಎಲ್ಲಾ ಮಕ್ಕಳಿಗೆ ಒಂದು ಪುಸ್ತಕವನ್ನು ನೀಡಲು ಸದಸ್ಯತ್ವ ಭದ್ರತಾ ಠೇವಣಿಯನ್ನು ಗ್ರಾಮ ಪಂಚಾಯಿತಿಗಳಲ್ಲಿ ಸಂಗ್ರಹಿಸಲಾಗುವ ಗ್ರಂಥಾಲಯ ಸೆಸ್‌ನಿಂದ ಭರಿಸುವುದು.
- ಈ ಕ್ಷೇತ್ರದಲ್ಲಿ ಪರಿಣಿತಿ ಹೊಂದಿರುವ ಸ್ವಯಂ ಸೇವಾ ಸಂಸ್ಥೆಗಳ ನೆರವಿನಿಂದ ಮತ್ತು ಪರಿಣಿತ ನಿವೃತ್ತ ಶಿಕ್ಷಕರಿಂದ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವವನ್ನು ಬೆಳೆಸಲು ಗ್ರಾಮ ಪಂಚಾಯಿತಿ ಗ್ರಂಥಾಲಯಗಳಲ್ಲಿ ಚಟುವಟಿಕೆಗಳನ್ನು ಕೈಗೊಳ್ಳುವುದು.

ಮೇಲೆ ಉಲ್ಲೇಖಿಸಿದ ಎಲ್ಲಾ ಅಂಶಗಳನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಅನುಷ್ಠಾನಿಸಿ, ಸದರಿ ಯೋಜನೆಯನ್ನು ಯಶಸ್ವಿಗೊಳಿಸಿ, ಕೋವಿಡ್-19 ಸಾಂಕ್ರಾಮಿಕ ರೋಗದ ಸಂಕಷ್ಟ ಕಾಲದಲ್ಲಿ ಮಕ್ಕಳ ಮಾನಸಿಕ, ಶೈಕ್ಷಣಿಕ ಹಾಗೂ ಬೌದ್ಧಿಕ ಬೆಳವಣಿಗೆಗೆ ಅನುಕೂಲವಾಗುವಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂಚಾಯತ್ ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ